# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 11 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಡಿ.ಟಿ.ಶ್ರೀನಿವಾಸ್ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | CET ಮತ್ತು NEET ಪರೀಕ್ಷೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ವಿಶೇಷ ಪ್ರಾತಿನಿಧ್ಯ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, The Karnataka Professional Educational Institutions (Regulation of Admission and Determination of Fee) Act 2006, Karnataka Selection of Candidates for Admission to Government Seats in Professional Educational Institutions Rules 2006, Karnataka Conduct of Entrance Test for Selection and Admission to Post Graduate Medical and Dental Degree and Diploma Courses Rules 2006 and "Amendments" ಅನ್ವಯ ವೃತ್ತಿಪರ ಕೋರ್ಸುಗಳಿಗೆ ಸೀಟು ಹಂಚಿಕೆಯನ್ನು ನಡೆಸುತ್ತಿದೆ.<br><br>ಸಿಇಟಿ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುತ್ತಿದ್ದು, ಸದರಿ ಪರೀಕ್ಷೆಯಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭ್ಯರ್ಥಿಗಳಿಗೆ ವಿಶೇಷ ಪ್ರಾತಿನಿಧ್ಯ ನೀಡಿರುವುದಿಲ್ಲ.<br><br>ಆದರೆ ಸದರಿ ಅಭ್ಯರ್ಥಿಗಳು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1ರ ವ್ಯಾಪ್ತಿಗೆ ಒಳಪಡುತ್ತಿದ್ದು, CET Rank ಮತ್ತು NEET Rank ಹಾಗೂ ಮೀಸಲಾತಿಯನ್ನು ಆಧರಿಸಿ ಸೀಟು ಹಂಚಿಕೆ ಮಾಡಲಾಗುತ್ತಿದೆ. ಅದೇ ರೀತಿ ನೀಟ್ ಪರೀಕ್ಷೆಯಲ್ಲಿ Rank ಆಧರಿಸಿ, ವಿವಿಧ ಕೋರ್ಸುಗಳಿಗೆ ಸೀಟು ಹಂಚಿಕೆಯಲ್ಲಿ ರಾಜ್ಯ ಸರ್ಕಾರದ ಮೀಸಲಾತಿ ನಿಯಮದಂತೆ ಸೀಟು ಹಂಚಿಕೆ ಮಾಡಲಾಗುತ್ತದೆ. |

<table>
<tr>
<td>ಆ</td>
<td>CET ಮತ್ತು NEET ಪರೀಕ್ಷೆಗಳಲ್ಲಿ ಹಿಂದುಳಿದ ವರ್ಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ನಿಗಧಿಪಡಿಸಿರುವ ಸೀಟುಗಳ ಸಂಖ್ಯೆ ಎಷ್ಟು;</td>
<td>ಸಿಇಟಿ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುತ್ತಿದ್ದು, ಪರೀಕ್ಷೆಯಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭ್ಯರ್ಥಿಗಳಿಗೆ ನಿರ್ದಿಷ್ಟ ಸೀಟುಗಳನ್ನು ಹಂಚಿಕೆ ಮಾಡಿರುವುದಿಲ್ಲ.<br><br>CET Rank ಮತ್ತು NEET Rank ಆಧರಿಸಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-01ರ ಅಡಿ ಪರಿಗಣಿಸಿ ವಿವಿಧ ಕೋರ್ಸುಗಳಿಗೆ ಸೀಟು ಹಂಚಿಕೆಯನ್ನು ಮಾಡಲಾಗುತ್ತಿದೆ.<br><br>ಪ್ರಾಧಿಕಾರದಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-01ರ ಅಭ್ಯರ್ಥಿಗಳಿಗೆ 2023ನೇ ಸಾಲಿನಲ್ಲಿ ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಸೀಟುಗಳ ಹಂಚಿಕೆಯ ವಿವರ ಈ ಕೆಳಕಂಡಂತಿದೆ.<br><br>
<table>
<tr><th rowspan="2">Category</th><th colspan="2">Engineering</th><th colspan="2">Medical</th><th colspan="2">Dental</th></tr>
<tr><th>Intake</th><th>Allotted</th><th>Intake</th><th>Allotted</th><th>Intake</th><th>Allotted</th></tr>
<tr><td>SC</td><td>10191</td><td>6645</td><td>794</td><td>794</td><td>147</td><td>147</td></tr>
<tr><td>ST</td><td>4206</td><td>2423</td><td>328</td><td>328</td><td>63</td><td>62</td></tr>
<tr><td>CAT -1</td><td>2372</td><td>1406</td><td>187</td><td>187</td><td>36</td><td>36</td></tr>
</table>
</td>
</tr>
<tr>
<td>ಇ)</td>
<td>2023-24ನೇ ಸಾಲಿನಲ್ಲಿ CET ಮತ್ತು NEET ಪರೀಕ್ಷೆಗಳಲ್ಲಿ ಆಯ್ಕೆಯಾಗಿರುವ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)</td>
<td>ಪ್ರವರ್ಗವಾರು ಸೀಟು ಹಂಚಿಕೆಯಾಗುವುದರಿಂದ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳ ಮಾಹಿತಿ ಪ್ರಾಧಿಕಾರದಲ್ಲಿ ಲಭ್ಯವಿರುವುದಿಲ್ಲ.</td>
</tr>
</table>

ಸಂ:ಇಡಿ 479 ಟಿಇಸಿ 2024

(ಡಾ.ಎಂ.ಸಿ.ಸುಧಾಕರ್)
**ಉನ್ನತ ಶಿಕ್ಷಣ ಸಚಿವರು**